# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತಿನ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 960 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಕೆ.ಹರೀಶ್ ಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ಸಚಿವರು | ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |
| ಉತ್ತರಿಸಬೇಕಾದ ದಿನಾಂಕ | 27.12.2022 |

| ಕ್ರ.ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ | ಬೆಂಗಳೂರು ನಗರ ಸೇರಿದಂತೆ ರಾಜ್ಯದಲ್ಲಿರುವ ಹಾಪ್ ಕಾಮ್ಸ್ ಗಳು ನಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? | ಬೆಂಗಳೂರು ನಗರ ಸೇರಿದಂತೆ ರಾಜ್ಯದಲ್ಲಿ 23 ಹಾಪ್ ಕಾಮ್ಸ್‌ಗಳು ಇದ್ದು, ಅವುಗಳಲ್ಲಿ 2021-22ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಯನ್ವಯ 08 ಹಾಪ್‌ಕಾಮ್ಸ್‌ಗಳು ಎಂದರೆ ಬೆಂಗಳೂರು, ಬಳ್ಳಾರಿ , ಬೀದರ್ , ಚಾಮರಾಜನಗರ , ಮಂಡ್ಯ , ಮಂಗಳೂರು, ಮೈಸೂರು ಹಾಗೂ ಹಾವೇರಿ ಜಿಲ್ಲಾ ಹಾಪ್‌ಕಾಮ್ಸ್ ಗಳು ನಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ | ಬಂದಿದ್ದಲ್ಲಿ ನಷ್ಟ ಸರಿದೂಗಿಸುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ? | **ನಷ್ಟ ಸರಿದೂಗಿಸುವುದಕ್ಕೆ ಕೈಗೊಂಡ ಕ್ರಮಗಳು ಈ ಕೆಳಕಂಡಂತಿವೆ**<br>▪ ಜಿಲ್ಲಾ ಹಾಪ್‌ಕಾಮ್ಸ್‌ಗಳ ವ್ಯಾಪಾರ ಅಭಿವೃದ್ಧಿಗಾಗಿ ರೂ.12.00 ಕೋಟಿಗಳ ದುಡಿಯುವ ಬಂಡವಾಳ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>▪ ಜಿಲ್ಲಾ ಹಾಪ್ ಕಾಮ್ಸ್ ಗಳು ಸರ್ಕಾರಿ ಇಲಾಖೆಗಳು ಮತ್ತು ಅಂಗ ಸಂಸ್ಥೆಗಳಿಗೆ ಹಣ್ಣು ಮತ್ತು ತರಕಾರಿಗಳ ಬೇಡಿಕೆಯನ್ನು ಪೂರೈಯಿಸಲು ಕೆ.ಟಿ.ಪಿ.ಪಿ. ಕಾಯಿದೆ 1999 ರ ಕಲಂ 4 (ಜಿ) ಅಡಿಯಲ್ಲಿ ವಿನಾಯಿತಿ ನೀಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |
| ಇ | ಹಾಪ್ ಕಾಮ್ಸ್ ನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಲ್ಲಿನ ಸಮನ್ವಯತೆ ಕೊರತೆ ಹಾಗೂ ಖಾಸಗಿ ಯವರೊಂದಿಗಿನ ಮಾರಾಟದಲ್ಲಿ ಸ್ಪರ್ಧಾತ್ಮಕ ಕೊರತೆ ಇಲ್ಲದಿರುವುದನ್ನು ಸರ್ಕಾರ ಮನಗಂಡಿದೆಯೇ; | ▪ ಜಿಲ್ಲಾ ಹಾಪ್‌ಕಾಮ್ಸ್‌ಗಳು ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಲ್ಲಿ ಸಮನ್ವಯತೆ ಕೊರತೆ ಇರುವುದಿಲ್ಲ.<br>▪ ಸ್ಥಳೀಯ ಮಾರುಕಟ್ಟೆ ಹಾಗೂ ಎ.ಪಿ.ಎಂ.ಸಿ.ಯಲ್ಲಿ ನಿಗಧಿ ಮಾಡುವ ಸಗಟು ಮಾರುಕಟ್ಟೆ ದರಗಳಿಗೆ ಅನುಗುಣವಾಗಿ ಬೆಲೆಗಳನ್ನು ನಿಗಧಿಪಡಿಸಿ, ಖಾಸಗಿಯವರೊಂದಿಗೆ ಸ್ಪರ್ಧಾತ್ಮಕವಾಗಿ ವ್ಯಾಪಾರ ವಹಿವಾಟನ್ನು ನಡೆಸಲಾಗುತ್ತಿದೆ. |
| ಈ | ಹಾಪ್ ಕಾಮ್ಸ್ ಗಳನ್ನು ಪುನಃಶ್ಚೇತನ ಗೊಳಿಸುವುದಕ್ಕೆ ಅಗತ್ಯವಿರುವ ಕ್ರಮಗಳನ್ನು ಸರ್ಕಾರ ಕೈಗೊಳ್ಳಲು ಮುಂದಾಗುವುದೇ? | ಹೌದು. |

No. HORTI/617/HGM/2022

(ಮುನಿರತ್ನ)
ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು